PW-1

ಸಾಕ್ಷಿಯನ್ನು ದಿನಾಂಕ 26.02.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿ ಪರ ವಕೀಲರಾದ ಶ್ರೀ ಪಿ.ಎಸ್.ಜಿ. ವಕೀಲರಿಂದಃ**

ನಾನು ಈ ದಾವೆಯ 1ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತದೆ ಮತ್ತು ಅದಕ್ಕೆ ನಾನು ನನ್ನ ಹೆಬ್ಬೆಟ್ಟಿನ ಗುರುತನ್ನು ಹಾಕಿರುತ್ತೇನೆ.

ದಿಃ 12.02.1962 ರ Mortgage Deed ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ದಿಃ 07.01.1963 ರ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಹುಣಸಿನಪುರ ಗ್ರಾಮದ ಸರ್ವೆ ನಂ. 19/1, 19/2 ರ ಪಹಣಿ ಪತ್ರಿಕೆಗಳನ್ನು ಕ್ರಮವಾಗಿ ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಉಪ ವಿಭಾಗಾಧಿಕಾರಿಗಳವರ ನ್ಯಾಯಾಲಯ, ಕೊಳ್ಳೇಗಾಲ ರವರ ಮೇಲ್ಮನವಿ ಪ್ರಕರಣ ಸಂಖ್ಯೆ 417/2020 ನೇದ್ದರಲ್ಲಿನ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಜಮೀನಿನು ಹಕ್ಕಿನ ದಾಖಲೆಯ ರಿಜಿಸ್ಟರ್ ನ ದೃಢೀಕೃತನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-6 ಎಂದು ಗುರುತಿಸಲಾಯಿತು.

**ಪ್ರತಿವಾದಿಯರು ಗೈರು ಹಾಜರಿದ್ದು, ಲಿಖಿತ ಹೇಳಿಕೆ ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇಳಿ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್

ಗುಂಡ್ಲುಪೇಟೆ